**ದಿನಾಂಕಃ 15.07.2026 ರಂದು ಸಾಕ್ಷಿಗೆ ಪ್ರಮಾಣ ವಚನವನ್ನು ಬೋಧಿಸಲಾಯಿತು.**

**ಪಾಟೀ ಸವಾಲುಃ ಪ್ರತಿವಾದಿ ಪರ ವಕೀಲರು ಕುಮಾರಿ ಎಸ್.ಎಸ್.ಆರ್. ರವರಿಂದ.**

(ಸಾಕ್ಷಿಗೆ ಕನ್ನಡ ಭಾಷೆಯು ಬರದೆ ಇರುವುದರಿಂದ ಮರಾಠಿ ಭಾಷೆಯಲ್ಲಿ ಕೇಳಿದ ಪ್ರಶ್ನೆಗಳನ್ನು ಅರ್ಥೈಸಿಕೊಂಡು ಉಭಯ ಪಕ್ಷಗಾರರ ವಕೀಲರ ಉಪಸ್ಥಿತಿ ಮೇರೆಗೆ ತರ್ಜುಮೆ ಮಾಡಿ ಕನ್ನಡ ಭಾಷೆಯಲ್ಲಿ ಸಾಕ್ಷ್ಯವನ್ನು ದಾಖಲಿಸಿಕೊಳ್ಳಲಾಯಿತು. ಕನ್ನಡ ಭಾಷೆಗೆ ತರ್ಜುಮೆ ಮಾಡಿ ನೀಡಿದ ಸಾಕ್ಷ್ಯವನ್ನು ದಾಖಲಿಸಿಕೊಳ್ಳಲು ಉಭಯ ಪಕ್ಷಗಾರರ ಪರ ವಕೀಲರು ಯಾವುದೇ ತಕರಾರು ಇಲ್ಲವೆಂದು ತಿಳಿಸಿರುತ್ತಾರೆ.)

1. ನಾನು 12 ನೇ ತರಗತಿಯವರೆಗೆ ಓದಿರುತ್ತೇನೆ. ದಾವೆ ಹಾಕಲು ನಾನೇ ಮಾಹಿತಿ ನೀಡಿರುತ್ತೇನೆ. ಸಾಕ್ಷ್ಯ ಪ್ರಮಾಣ ಪತ್ರದಲ್ಲಿ ಬರೆದಿರುವ ಸಂಗತಿಗಳ ಬಗ್ಗೆ ಮಾಹಿತಿ ಇರುತ್ತದೆ. ನಾನು ಹಾಜರುಪಡಿಸಿರುವ ದಾಖಲೆಗಳನ್ನು ನೋಡಿರುತ್ತೇನೆ ಹಾಗು ಅದರ ಬಗ್ಗೆ ನನಗೆ ಮಾಹಿತಿ ಇರುತ್ತದೆ. ರಘುನಾಥ ರಾಮಚಂದ್ರ ಗಿಂಡೆ ನನ್ನ ತಂದೆ. ರೇಖಾ ನನ್ನ ತಾಯಿ . ರಾಮಚಂದ್ರ ಗಿಂಡೆ ನನ್ನ ಅಜ್ಜ. ನನ್ನ ಅಜ್ಜಿಯ ಹೆಸರು ಗಂಗಾರಾಮ ರಾಮಂದ್ರ ಗಿಂಡೆ. ನನ್ನ ಅಜ್ಜ ಹಾಗು ಅಜ್ಜಿ ಮೃತಪಟ್ಟಿರುತ್ತಾರೆ. ನಿಮ್ಮ ಅಜ್ಜಿಯ ಮರಣ ಪ್ರಮಾಣ ಪತ್ರವನ್ನು ಹಾಜರುಪಡಿಸಲು ನಿಮಗೆ ತೊಂದರೆ ಇರುತ್ತದೆಯೇ ಎಂದರೆ ಸಾಕ್ಷಿಯು ನನ್ನ ಅಜ್ಜನ ಮರಣ ಪ್ರಮಾಣ ಪತ್ರವನ್ನು ಹಾಜರುಪಡಿಸಿರುತ್ತೇನೆ ಎನ್ನುತ್ತಾರೆ. ಸಾಕ್ಷಿಗೆ ತಾವು ನ್ಯಾಯಾಲಯಕ್ಕೆ ಹಾಜರುಪಡಿಸಿರುವ ದಾಖಲೆಗಳನ್ನು ತೋರಿಸಲಾಗಿ ಸಾಕ್ಷಿಯು ಅದರಲ್ಲಿ ತಮ್ಮ ಅಜ್ಜಿಯ ಮರಣ ಪ್ರಮಾಣ ಪತ್ರ ಇರುವುದಿಲ್ಲ ಎನ್ನುತ್ತಾರೆ. ಸಾಕ್ಷಿಯು ಅದನ್ನು ಹಾಜರುಪಡಿಸುತ್ತೇನೆ ಎನ್ನುತ್ತಾರೆ. ನಿಮ್ಮ ತಂದೆಯ ಆಸ್ತಿಯ ಸಂಖ್ಯೆ ಸಿ.ಟಿ.ಎಸ್ ನಂ. 5424 ಇದ್ದು ಅದು ಕಂಗ್ರಾಳಿ ಬಿ.ಕೆಯಲ್ಲಿ ಇರುತ್ತದೆ ಎಂದರೆ ಸರಿ. ಸದರಿ ಸ್ವತ್ತು ನಗರ ವ್ಯಾಪ್ತಿಗೆ ಸೇರಿರುತ್ತದೆ ಎಂದರ ಸರಿ. ಸಿ.ಟಿ. ಎಸ್ ನಂ. 5424 ರಲ್ಲಿ

ನಿಮ್ಮ ಚಿಕ್ಕಪ್ಪನ ಹೆಸರು ಇರುತ್ತದೆ ಎಂದರೆ ಸರಿ. ಅವರನ್ನು ಪಕ್ಷಗಾರರನ್ನಾಗಿ ಮಾಡಿರುವುದಿಲ್ಲ ಎಂದರೆ ಸರಿ. ಸಿ.ಟಿ. ಎಸ್ ನಂ. 5424 ನ್ನು ನನ್ನ ತಂದೆ ಹಾಗು ಚಿಕ್ಕಪ್ಪ ರವರಿಗೆ ನನ್ನ ಅಜ್ಜ 2014 ರಲ್ಲಿ ದಾನ ಕೊಟ್ಟಿರುತ್ತಾರೆ ಎಂದರೆ ಸರಿ. ನನ್ನ ತಂದೆ 2015 ರಲ್ಲಿ ಮೃತ ಪಟ್ಟಿರುತ್ತಾರೆ. ನನ್ನ ತಂದೆ ಮೃತಪಡುವ ಸಮಯದಲ್ಲಿ ನನಗೆ ಸದರಿ ಆಸ್ತಿಯ ಬಗ್ಗೆ ಗೊತ್ತಾಗಿರುತ್ತದೆ. ನಿಮ್ಮ ತಂದೆ ಮೃತಪಟ್ಟ ನಂತರ ವಾರಸು ಪ್ರಮಾಣ ಪತ್ರವನ್ನು ಪಡೆದುಕೊಳ್ಳಲು ನಿಮಗೆ ಅಡಚಣೆ ಇರುತ್ತದೆಯೇ ಎಂದರೆ ಸಾಕ್ಷಿಯು ನಾನು ಅರ್ಜಿ ಸಲ್ಲಿಸಿರುತ್ತೇನೆ ಎನ್ನುತ್ತಾರೆ. ನೀವು ಅರ್ಜಿ ಸಲ್ಲಿಸಿರುತ್ತೀರಾ ಎಂದು ತೋರಿಸಲು ದಾಖಲೆಗಳನ್ನು ನ್ಯಾಯಾಲಯಕ್ಕೆ ದಾಖಲೆಗಳನ್ನು ಹಾಜರುಪಡಿಸಿರುತ್ತೀರಾ ಎಂದರೆ ಸಾಕ್ಷಿಯು ನಾನು ಪಿ.ಎಸ್ .ಪಾಟೀಲ ವಕೀಲರಿಗೆ ನೀಡಿರುತ್ತೇನೆ ಅವರು ಈಗ ಮೃತಪಟ್ಟಿರುತ್ತಾರೆ ಎನ್ನುತ್ತಾರೆ. ನನ್ನ ತಂದೆ ಮೃತಪಟ್ಟ ನಂತರ ಉತಾರದಲ್ಲಿ ನನ್ನ ಹೆಸರನ್ನು ಹಾಕಲು ಪ್ರಯತ್ನ ಪಟ್ಟಿರುತ್ತೇನೆ. ಸಿಟಿ ಸರ್ವೆ ಅಧಿಕಾರಿಗಳನ್ನು ಪಕ್ಷಗಾರರನ್ನಾಗಿ ಮಾಡಲು ನನಗೆ ತೊಂದರೆ ಇರುವುದಿಲ್ಲ. ನಿಮ್ಮ ತಂದೆಯ ಆಸ್ತಿಯನ್ನು ಪಡೆದುಕೊಳ್ಳಲು ಸುಳ್ಳು ದಾವೆ ಹೂಡಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೀರಿ ಎಂದರೆ ಸರಿಯಲ್ಲ.

**ಮರುವಿಚಾರಣೆ ಇಲ್ಲ.**

**(ಸಾಕ್ಷಿಯ ಹೇಳಿಕೆಯನ್ನು ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು.)**

ಓದಿ ಹೇಳಿ ಕೇಳಿ ಸರಿಯಿದೆ.

**4ನೇ ಹೆಚ್ಚುವರಿ ದಿವಾಣಿ ನ್ಯಾಯಾಧೀಶರ ನ್ಯಾಯಾಲಯ,**
**ಮತ್ತು ಪ್ರ.ದ.ನ್ಯಾ.ದಂ. ಬೆಳಗಾವಿ.**